# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ವರ್ಗಗಳ ಮಾರಾಟಗಾರರ ನಮೂದಿತ ಪಟ್ಟಿಯ ಕುರಿತು.

ಓದಲಾಗಿದೆ:

ದಿನಾಂಕ 9.1.2007ರ ಸರ್ಕಾರದ ಆದೇಶ ಸಿಆಸುಇ 7 ವಿಮಆ 2006.

ಪ್ರಸ್ತಾವನೆ:

ರಾಜ್ಯದಲ್ಲಿರುವ ವಿವಿಧ ಸರ್ಕಾರಿ ಕಛೇರಿಗಳಲ್ಲಿ ಗಣಕೀಕರಣಕ್ಕಾಗಿ ಅವಶ್ಯವಿರುವ ಗಣಕ ಯಂತ್ರಗಳು, ಪ್ರಿಂಟರಗಳು, ಅವುಗಳ ಪೂರಕ ಸಾಧನಗಳು, ವಿವಿಧ ತಂತ್ರಾಂಶಗಳು, ತಂತ್ರಾಂಶ ಸಿದ್ಧಪಡಿಸುವ, ನೆಟ್ ವರ್ಕಿಂಗ್, ಯು.ಪಿ.ಎಸ್., ತರಬೇತಿ, ವೆಬ್ ಡಿಸೈನಿಂಗ್, ಡೇಟಾ ಎಂಟ್ರಿ, ಹಾಗೂ ವಾರ್ಷಿಕ ನಿರ್ವಹಣೆ ಮುಂತಾದ ಸಾಮುಗ್ರಿ/ಸೇವೆಗಳನ್ನು ಪೂರೈಸುವುದಕ್ಕಾಗಿ ನಾನಾ ಸಂಸ್ಥೆಗಳನ್ನು ಸಂಕ್ಷಿಪ್ತಗೊಳಿಸಿ, ಮಾರಾಟಗಾರರ ಪಟ್ಟಿಗೆ ಮೇಲೆ ಓದಲಾದ ಸರ್ಕಾರದ ಆದೇಶದ ಮೂಲಕ ಅನುಮೋದನೆ ನೀಡಲಾಗಿತ್ತು. ಸದರಿ ಪಟ್ಟಿಯಲ್ಲಿರುವ ಸಂಸ್ಥೆಗಳ ಸಿಂಧುತ್ವವು 31.12.2008ಗೆ ಕೊನೆಗೊಂಡಿರುತ್ತದೆ. 2009–2010ನೇ ಸಾಲಿಗೆ ಹೊಸ ಪಟ್ಟಿ ಸಿದ್ಧಪಡಿಸುವ ಪ್ರಕ್ರಿಯೆ ಇನ್ನೂ ಅಂತಿಮವಾಗಿಲ್ಲವಾದ್ದರಿಂದ, ಮೇಲೆ ಓದಲಾದ ಸರ್ಕಾರದ ಆದೇಶದನ್ವಯ ಚಾಲ್ತಿಯಲ್ಲಿದ್ದ ಮಾರಾಟಗಾರರ ಪಟ್ಟಿಯ ಸಿಂಧುತ್ವವನ್ನು 31.3.2009ರವರಿಗೆ ಅಥವಾ ಹೊಸ ಪಟ್ಟಿ ಸಿದ್ಧಗೊಳ್ಳುವವರಿಗೆ ಯಾವದೂ ಮೊದಲು ಅಲ್ಲಿಯವರಿಗೆ ವಿಸ್ತರಿಸುವುದು ಅವಶ್ಯವಾಗಿದೆ. ಅದರಂತೆ ಕೆಳಕಾಣಿಸಿದ ಸರ್ಕಾರದ ಆದೇಶವನ್ನು ಪ್ರಸ್ತಾಪಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 7 ವಿಮಆ 2006, ಬೆಂಗಳೂರು ದಿನಾಂಕ 5ನೇ ಜನೇವರಿ 2009.**

ರಾಜ್ಯದಲ್ಲಿರುವ ವಿವಿಧ ಸರ್ಕಾರಿ ಕಛೇರಿಗಳಲ್ಲಿ ಗಣಕೀಕರಣಕ್ಕಾಗಿ ಅವಶ್ಯವಿರುವ ಗಣಕ ಯಂತ್ರಗಳು, ಪ್ರಿಂಟರಗಳು, ಅವುಗಳ ಪೂರಕ ಸಾಧನಗಳು, ವಿವಿಧ ತಂತ್ರಾಂಶಗಳು, ತಂತ್ರಾಂಶ ಸಿದ್ಧಪಡಿಸುವ, ನೆಟ್ ವರ್ಕಿಂಗ್, ಯು.ಪಿ.ಎಸ್., ತರಬೇತಿ, ವೆಬ್ ಡಿಸೈನಿಂಗ್, ಡೇಟಾ ಎಂಟ್ರಿ, ಹಾಗೂ ವಾರ್ಷಿಕ ನಿರ್ವಹಣೆ ಮುಂತಾದ ಸಾಮುಗ್ರಿ/ಸೇವೆಗಳನ್ನು ಪೂರೈಸುವುದಕ್ಕಾಗಿ ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿನ ಸಂಸ್ಥೆಗಳ ಸಿಂಧುತ್ವವನ್ನು ದಿನಾಂಕ 31.3.2009ರವರಿಗೆ ಅಥವಾ ಹೊಸ ಪಟ್ಟಿ ಸಿದ್ಧಗೊಳ್ಳುವವರಿಗೆ ಯಾವದು ಮೊದಲು ಅಲ್ಲಿಯವರಿಗೆ ವಿಸ್ತರಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

5/1/2009

(ಗಂಗಾಧರ. ನಿಂ. ದಾಟನಾಳ)
ಪೀಠಾಧಿಕಾರಿ, ಇ–ಆಡಳಿತ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಸು)

1. ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟನೆಗಾಗಿ.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಮಹಾಲೇಖಾಪಾಲಕರು, ಲೆಕ್ಕಪತ್ರ 1 ಮತ್ತು 2, ಕರ್ನಾಟಕ, ಬೆಂಗಳೂರು.
4. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ–1), ವಿಧಾನ ಸೌಧ, ಬೆಂಗಳೂರು.
6. ಸಂಬಂಧಪಟ್ಟ ಸಂಸ್ಥೆಗಳು.
7. ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿಗಳು.